ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ,ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/2013/2012-13. ದಿನಾಂಕ: 27-05-2013.

**ಸುತ್ತೋಲೆ**

ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು 18-05-2013 ರಂದು ಕಡೇ ದಿನಾಂಕ ಎಂದು ನಿಗದಿಪಡಿಸಲಾಗಿತ್ತು, ನಂತರ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು 23-05-2013 ಕ್ಕೆ ವಿಸ್ತರಿಸಲಾಯಿತು. ಮತ್ತೆ ವಿದ್ಯಾರ್ಥಿಗಳ ಹಾಗೂ ಪೋಷಕರ ವಿನಂತಿಯಮೇರೆಗೆ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು 31-05-2013 ರವರೆಗೆ ವಿಸ್ತರಿಸಲಾಗಿದೆ. ಯಾವುದೇ ಕಾರಣಕ್ಕೂ ಈ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

ಈಗಾಗಲೇ ಶುಲ್ಕಪಾವತಿಸಿದ ವಿದ್ಯಾರ್ಥಿಗಳ ಅರ್ಜಿಗಳನ್ನು ಈ ಹಿಂದೆ ತಿಳಿಸಿದ ವೇಳಾಪಟ್ಟಿಯಂತೆ ಕೇಂದ್ರ ಕಛೇರಿಗೆ ಸಲ್ಲಿಸುವುದು ಹಾಗೂ 27-05-2013 ರಿಂದ 31-05-2013 ರ ವರೆಗೆ ಸಲ್ಲಿಸಿದ ಅರ್ಜಿಗಳನ್ನು ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಂದ ಪಡೆದು ದಿನಾಂಕ 03-06-2013 ರಂದು ಎಲ್ಲಾ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಉಪ ನಿರ್ದೇಶಕರುಗಳು ತಪ್ಪದೆ ಕೇಂದ್ರ ಕಛೇರಿಗೆ ತಲುಪಿಸಲು ಸೂಚಿಸಲಾಗಿದೆ

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:
1. ಜಿಲ್ಲಾ ಉಪನಿರ್ದೇಶಕರುಗಳು, ಪಪೂಶಿಇ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ಎಲ್ಲಾ ಕಾಲೇಜುಗಳ ಪ್ರಾಚಾರ್ಯರುಗಳಿಗೆ, (ಜಿಲ್ಲಾ ಉಪ ನಿರ್ದೇಶಕರುಗಳ ಮೂಲಕ)